## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗಕ್ಕೆ 2016-17ನೇ ಸಾಲಿನ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** (1) ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ ಇವರ ಪತ್ರ ಸಂಖ್ಯೆ:ಮಪ್ರಮಂ:ನಗದು:ಹ:ಬಿ:2016-17/2287, ದಿನಾಂಕ:15.03.2017
(2) ಸರ್ಕಾರಿ ಆದೇಶ ಸಂಖ್ಯೆ:ಯೋಇ 20 ಮಪ್ರಮಂ 2016, ದಿನಾಂಕ:14.06.2016.
(3) ಸರ್ಕಾರಿ ಆದೇಶ ಸಂಖ್ಯೆ:ಯೋಇ 20 ಮಪ್ರಮಂ 2016, ದಿನಾಂಕ:04.11.2016.
(4) ಸರ್ಕಾರಿ ಆದೇಶ ಸಂಖ್ಯೆ:ಯೋಇ 20 ಮಪ್ರಮಂ 2016, ದಿನಾಂಕ:10.02.2017.

**ಪ್ರಸ್ತಾವನೆ:**

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗೆ 2016-17ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನ ಮತ್ತು ಮೇಲೆ ಕ್ರಮಸಂಖ್ಯೆ (2) (3) ಮತ್ತು (4) ರಲ್ಲಿ ಓದಲಾದ ಆದೇಶಗಳಲ್ಲಿ ಬಿಡುಗಡೆ ಮಾಡಿರುವ ಮೊದಲನೇ, ಎರಡನೇ ಮತ್ತು ಮೂರನೇ ಕಂತಿನ ಅನುದಾನದ ವಿವರಗಳು ಈ ಕೆಳಕಂಡಂತಿವೆ:

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ಆಯವ್ಯಯದಲ್ಲಿ ಒದಗಿಸಿರುವ ಅನುದಾನ (ರೂ. ಲಕ್ಷಗಳಲ್ಲಿ) | ಬಿಡುಗಡೆ | | |
|---|---|---|---|---|---|
| | | | ಮೊದಲನೇ ಕಂತು (ರೂ. ಲಕ್ಷಗಳಲ್ಲಿ) | ಎರಡನೇ ಕಂತು (ರೂ. ಲಕ್ಷಗಳಲ್ಲಿ) | ಮೂರನೇ ಕಂತು (ರೂ. ಲಕ್ಷಗಳಲ್ಲಿ) |
| 1 | 2515-00-103-0-02-101 | 41.00 | 10.25 | 10.25 | 10.25 |
| 2 | 2515-00-103-0-02-132 | 3751.00 | 937.75 | 937.75 | 937.75 |
| 3 | 2515-00-103-0-02-422 | 859.00 | 214.75 | 214.75 | 214.75 |
| 4 | 2515-00-103-0-02-423 | 349.00 | 87.25 | 87.25 | 87.25 |
| | **ಒಟ್ಟು** | **5000.00** | **1250.00** | **1250.00** | **1250.00** |

ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ, ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ ಇವರು ಮಂಡಳಿಯಲ್ಲಿ ಲಭ್ಯವಿದ್ದ ಅನುದಾನದ ಶೇಕಡ 75.21 ರಷ್ಟನ್ನು ಖರ್ಚು ಮಾಡಿದ್ದು, ಪ್ರಗತಿಗನುಗುಣವಾಗಿ ಕಾಮಗಾರಿಗಳ ಬಿಲ್ಲುಗಳನ್ನು ಇತ್ಯರ್ಥಪಡಿಸಲು 2016-17ನೇ ಸಾಲಿನ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡಲು ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗೆ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡಲು ಉದ್ದೇಶಿಸಿದೆ. ಅದರಂತೆ ಈ ಆದೇಶ.

### ಸರ್ಕಾರಿ ಆದೇಶ ಸಂಖ್ಯೆ:ಯೋಇ 20 ಮಪ್ರಮಂ 2016, ಬೆಂಗಳೂರು, ದಿನಾಂಕ:22.03.2017

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗಕ್ಕೆ 2016-17ನೇ ಸಾಲಿನ ನಾಲ್ಕನೇ ಕಂತಿನ ಅನುದಾನವಾಗಿ ರೂ.1250.00 ಲಕ್ಷ (ಹನ್ನೆರಡು ಕೋಟಿ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆ ಮಾಡಿದೆ.

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | 2515-00-103-0-02-101 (ಸಹಾಯಾನುದಾನ) | 10.25 |
| 2 | 2515-00-103-0-02-132 (ಬಂಡವಾಳ ವೆಚ್ಚ) | 937.75 |
| 3 | 2515-00-103-0-02-422 (ವಿಶೇಷ ಘಟಕ ಯೋಜನೆ) | 214.75 |
| 4 | 2515-00-103-0-02-423 (ಗಿರಿಜನ ಉಪಯೋಜನೆ) | 87.25 |
| | **ಒಟ್ಟು** | **1250.00** |

1. ಬಿಡುಗಡೆಯಾದ ಈ ಅನುದಾನವನ್ನು ಮಂಡಳಿಯ ಬ್ಯಾಂಕ್ ಖಾತೆಗೆ ಜಮೆ ಮಾಡಿ, ನಂತರ ಅವಶ್ಯಕತೆಗನುಗುಣವಾಗಿ ಖರ್ಚು ಮಾಡತಕ್ಕದು.
2. ಮಂಡಳಿಯ ಬ್ಯಾಂಕ್ ಖಾತೆಯಲ್ಲಿ ಲಭ್ಯವಿರುವ ಅನುದಾನ ಮತ್ತು ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನದ ಬಳಕೆಯಾದ ನಂತರ ಹಣ ಬಳಕೆ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 06 ಟಿಎಫ್‌ಪಿ 2016, ದಿನಾಂಕ:27.12.2016ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಫೀ ಅಹಮದ್.ಎಂ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ-1&2,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
4. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
5. ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ.
6. ನಿರ್ದೇಶಕರು, ಎಡಿಬಿ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
9. ಶಾಖಾಧಿಕಾರಿ, ಸ್ಕೀಮರ ಶಾಖೆ, ಯೋಜನಾ ಇಲಾಖೆ (ಕಾಂಪೆಂಡಿಯಮ್‌ಗೋಸ್ಕರ).
10. ವಾರದ ರಾಜ್ಯಪತ್ರ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

***